**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಿ ಎಂ ಫಾರೂಖ್ ಇವರು ನಿಯಮ-72 ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಪ್ರಶ್ನೆ:**

ವ್ಯಾಪಾರ ಹಾಗೂ ವಾಣಿಜ್ಯ ಉದ್ದೇಶಕ್ಕಾಗಿ ವಿಧಾನ ಮಂಡಲದ ಶಾಸಕರುಗಳು ವಿದೇಶಿ ಕಂಪನಿಗಳೊಂದಿಗೆ ಬಂಡವಾಳ ಹೂಡಲು ಹಾಗೂ ವ್ಯಾಪಾರ ಮಾಡಲು ಹಲವಾರು ಅಡೆತಡೆಗಳು ಉಂಟಾಗುತ್ತಿರುವ ಬಗ್ಗೆ ಹಾಗೂ ಕೆಲವು ರಾಷ್ಟ್ರೀಕೃತ ಬ್ಯಾಂಕ್ ಗಳು ಸಹ **"ಶಾಸಕರು"** ಎಂಬ ಕಾರಣದಿಂದ ವಿಧಾನ ಮಂಡಲದ ಶಾಸಕರುಗಳಿಗೆ ವ್ಯಾಪಾರ ಹಾಗೂ ವಾಣಿಜ್ಯ ಉದ್ದೇಶಕ್ಕಾಗಿ ನೀಡುತ್ತಿರುವ ಸಾಲವನ್ನು ಸಹ ಮಂಜೂರು ಮಾಡದೇ ತಡೆಹಿಡಿಯುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

ಸದರಿ ವಿಷಯದ ಬಗ್ಗೆ, ಸಂಚಾಲಕರು, ರಾಜ್ಯ ಮಟ್ಟದ ಬ್ಯಾಂಕರುಗಳ ಸಮಿತಿ ಮತ್ತು ಪ್ರಾದೇಶಿಕ ನಿರ್ದೇಶಕರು, ಭಾರತೀಯ ರಿಸರ್ವ್ ಬ್ಯಾಂಕ್, ಪ್ರಾದೇಶಿಕ ಕಚೇರಿ , ಬೆಂಗಳೂರು ರವರಿಂದ ಮಾಹಿತಿ ಮತ್ತು ಅಭಿಪ್ರಾಯ ಕೋರಲಾಗಿತ್ತು.

ಸಂಯೋಜಕರು, ರಾಜ್ಯ ಮಟ್ಟದ ಬ್ಯಾಂಕರುಗಳ ಸಮಿತಿರವರು ದಿ: 08.09.2022 ರ ಪತ್ರದಲ್ಲಿ ಈ ಕೆಳಗಿನಂತೆ ಮಾಹಿತಿಯನ್ನು ನೀಡಿರುತ್ತಾರೆ:

1. ವ್ಯಾಪಾರ ಹಾಗೂ ವಾಣಿಜ್ಯ ಉದ್ದೇಶಕ್ಕಾಗಿ ವಿಧಾನ ಮಂಡಲದ ಶಾಸಕರುಗಳು ವಿದೇಶಿ ಕಂಪನಿಗಳೊಂದಿಗೆ ಬಂಡವಾಳ ಹೂಡಲು ಹಾಗೂ ವ್ಯಾಪಾರ ಮಾಡಲು ಹಲವಾರು ಅಡೆತಡೆಗಳು ಉಂಟಾಗುತ್ತಿರುವ ಬಗ್ಗೆ ಹಾಗೂ ಕೆಲವು ರಾಷ್ಟ್ರೀಕೃತ ಬ್ಯಾಂಕುಗಳು ಸಹ **"ಶಾಸಕರು"** ಎಂಬ ಕಾರಣದಿಂದ ವಿಧಾನ ಮಂಡಲದ ಶಾಸಕರುಗಳಿಗೆ ವ್ಯಾಪಾರ ಹಾಗೂ ವಾಣಿಜ್ಯ ಉದ್ದೇಶಕ್ಕಾಗಿ ನೀಡುತ್ತಿರುವ ಸಾಲವನ್ನು ಸಹ ಮಂಜೂರು ಮಾಡದಿರುವಂತೆ ಭಾರತೀಯ ರಿಸರ್ವ್ ಬ್ಯಾಂಕಿನಿಂದ ರಾಷ್ಟ್ರೀಕೃತ ಬ್ಯಾಂಕುಗಳಿಗೆ ಯಾವುದೇ ಮಾರ್ಗಸೂಚಿಗಳನ್ನು ನೀಡಿರುವುದಿಲ್ಲ ಮತ್ತು ರಾಷ್ಟ್ರೀಕೃತ ಬ್ಯಾಂಕುಗಳಲ್ಲಿಯೂ ಸಹ ಯಾವುದೇ ಮಾರ್ಗಸೂಚಿಗಳು ಇರುವುದಿಲ್ಲ.

2. ರಾಷ್ಟ್ರೀಕೃತ ಬ್ಯಾಂಕುಗಳ ಮಾರ್ಗಸೂಚಿಗಳು ಯೋಜನೆಗಳ ತಾಂತ್ರಿಕ ಕಾರ್ಯಸಾಧ್ಯತೆ (Technical Feasibility) ಮತ್ತು ಆರ್ಥಿಕ ಕಾರ್ಯಸಾಧ್ಯತೆ (Financial Viability) ಯ ಆಧಾರದ ಮೇಲೆ ಸಾಲಗಳ ಪ್ರಕ್ರಿಯೆ ಮತ್ತು ಮಂಜೂರಾತಿಗಳು ಅನುಸರಿಸುತ್ತವೆ.

3. ರಾಷ್ಟ್ರೀಕೃತ ಬ್ಯಾಂಕುಗಳು ತಮ್ಮದೇ ಆದ ಮಾರ್ಗಸೂಚಿಗಳನ್ನು ಯೋಜನೆಗಳ ತಾಂತ್ರಿಕ ಕಾರ್ಯಸಾಧ್ಯತೆ (Technical Feasibility) ಮತ್ತು ಆರ್ಥಿಕ ಕಾರ್ಯಸಾಧ್ಯತೆ (Financial Viability) ಯ ಆಧಾರದ ಮೇಲೆ ಎಲ್ಲಾ ಗ್ರಾಹಕರಿಗೆ ಸಾಲಗಳನ್ನು ಪ್ರಕ್ರಿಯೆಗೊಳಿಸಲು ಮತ್ತು ಮಂಜೂರು ಮಾಡಲು, ನಿಯಂತ್ರಕರು ನಿಗದಿಪಡಿಸಿದ ಮಾರ್ಗಸೂಚಿಗಳನ್ನು ಅನುಸರಿಸುತ್ತವೆ.

ಸಂಖ್ಯೆ: ಎಫ್‌ಡಿ-ಸಿಎಂ/168/2022
(ಇ-ಕಡತ)

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ